ತಿಳುವಳಿಕೆ ಷರಾ.—ಬಂದು ಸರ್ವೆ ನಂಬರು ಪೈಕಿ ಕೆಲವು ಜಾಗಾಕ್ಕೆ ದರಖಾಸ್ತು ಬಂದು ಕಬ್ಜಾ ಆಗತೆ ಪ್ರಕಾರ ಅಂದಾಜಾ ಎಕರೆ ಮೇಲೆ ಅಸ್ಸೆಸ್ಟ್‌ಮೆಂಟ್ಸ್ ವಸೂಲಾದ್ದರಲ್ಲಿ ಕ್ರರಾರು ವಾಕಾ ಮೋಜಣೀ ಎಕರಿಗೆ ಗಣನೀಯವಾದಷ್ಟು ಕಮ್ಮಿ ಜಾಸ್ತೀ ಆದರೆ ಜಾಸ್ತೀ ಎಕರೆ ಸಂಬಂಧ ಅಸ್ಸೆಸ್ಟ್‌ಮೆಂಟ್ಸ್ ವಸೂಲೀ ಕೊಡುವದಕ್ಕೆ ಆಗಲಿ ಕಮ್ಮಿ ಎಕರೆ ಸಂಬಂಧ ವಾಪಸು ಪಡಿಯುವದಕ್ಕೆ ಆಗಲಿ ಜರ್ಮೀ ಹಿಡುವಳಿದಾರನು ಬದ್ಧ ವ ಅರ್ಹನಾಗಿರಬೇಕು.

ಹೆಚ್. ಹೆಚ್. ಸ್ಪಾರ್ಕ್ಸ್,
ಡೆಪ್ಯುಟಿ ಕಮ್ಮಿಷನರ್.

ಮೈಸೂರ ಗೆಜೆಟ್ ಚಂದಾ ದರ ವಗೈರೆ.

ತಾರೀಖು 26ನೇ ಜನವರಿ 1889.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ಮುಂತಾದವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರೆಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.		ಟಪ್ಪಾಲ್ ಹಾಸಲು ಮೈಸೂರು ಶೀಮೆ ಶಿವಾಯಿ ಇತರ ಸ್ಥಳಗಳಿಗೆ.	
	ರೂ.	ಆ.	ರೂ.	ಆ.
ಇಂಗ್ಲೀಷು ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3	8	1	12
ಇಂಗ್ಲೀಷು ಮತ್ತು ಕನ್ನಡ ಸುದಾ 12 ತಿಂಗಳಿಗೆ	7	0	3	8
ಜಷ್ ಮಾಹೇ ಯಾ ಕ್ವಾರ್ಟರಿಗೆ			ದಾಮಾಷಾಯಿ ಪ್ರಕಾರ ದರಗಳು	
ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಸ್ ಯಾ ಆಕ್ಟ್ಸುಗಳು ಯಾವದೂ ಇಲ್ಲದಿದ್ದರೆ.			0	8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜು ಕೇಳಿ ತಿಳಿದುಕೊಳ್ಳಬಹುದು.

1891ನೇ ಇಸವಿ ಜುಲೈ 2ನೇ ಮಕ್ತುಂ 155ನೇ ನಂಬರ್ ಉಳ್ಳ ಗವರ್ಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ಶೀಮೆಯಲ್ಲಿನ ಪಟೇಲ್ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ್, ಶಾನುಭೋಗರುಗಳ ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭವಿಕೆ ಕೆಲಸ ನೋಡುತಲಿದ್ದಾರೆಂಬದಾಗಿ ಆಯಾ ತಾಲ್ಲೂಕು ಅಮಲ್‌ದಾರರಿಂದ ವಂದು ಸರಟಿಫಿಕೇಟನ್ನ ಪಡೆದು ಹಾಜರ್ಮಾಡಬೇಕಾಗಿರುತ್ತೆ.

1895ನೇ ಇಸವಿ ಜೂನ್ 21ನೇ ಮಕ್ತುಂ 24205—6—ಜಿ. 6200ನೇ ನಂಬರ್ ಗವರ್ಮೆಂಟ್ ಆರ್ಡರ್ ಅನುಸರಿಸಿ ಮೇಲ್ಕಂಡ ರಿಯಾಯತಿ ದರವು, ನಾಡ ಪಟೇಲರಿಗೂ ಲಗಾವ್ ಮಾಡಲ್ಪಟ್ಟಿರುತ್ತೆ.

ಸಿವಿಲ್ ಕೋರ್ಟ್‌ನಿಂದ ಕೊಡಲ್ಪಡುವ 1860ನೇ ಇಸವಿ XXVIIನೇ ಆಕ್ಟ್ಸು ಅನುಸರಿಸಿ ಸರ್ಟಿಫಿಕೇಟ್ ಬಗ್ಯೆ ನೋಟಿಸ್‌ಗಳು:—

ಮೊದಲನೇ ದಫಾ ಫಾಯಿಷ್ ಮಾಡತಕ್ಕ ಬಗ್ಯೆ ಇಂಗ್ಲೀಷು ಅಥವಾ ಕನ್ನಡ	..	2 8
ಎರಡನೇ ಸಲ ವ ಆ ತರುವಾಯ ಪ್ರತಿ ಆವರ್ತಿಗೂ ಡಿಟೋ	.. ..	1 4

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 347ನೇ ಸೆಕ್ಷರ್ಷ ಅನುಸರಿಸಿ ದಿವಾಳೀ ಅಪ್ಲಿಕೇಷ್ಟಗಳ ಬಗ್ಯೆ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ	.. ..	5 0
ಎರಡನೇ ವ ಆ ತರುವಾಯ ಪ್ರತಿ ದಫಾಕ್ಕೆ	.. ..	2 8

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 354ನೇ ಸೆಕ್ಷರ್ಷ ಅನುಸರಿಸಿ ಸಿವಿಲ್ ಕೋರ್ಟುಗಳಿಂದ ಕೊಡಲ್ಪಡುವ ದಿವಾಳೀ ಹುಕುಂಗಳು ಬಗರ್ ಚಾರ್ಜ್ ಪ್ರಕಟಿಸಲ್ಪಡುತವೆ.

ಡ್ಯೂಪ್ಲಿಕೇಟ್ ಕಾಫೀ ಪಟ್ಟೆ ವಗೈರೇ ಕೊಡುವ ಬಗ್ಯೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ	ಪುಟ 1ಕ್ಕೆ ..	10 0
ಎರಡನೇ ಸಲ ವ ಆ ತರುವಾಯ ಪ್ರತಿ ಸಲಕ್ಕೂ	" ..	5 0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳಪ್ರಕಾರ ಚಾರ್ಜ್ ಮಾಡಲ್ಪಡುತ್ತೆ:—

ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ	ಪಟ್ಟಿ 1ಕ್ಕೆ ..	0	8
ಎರಡನೇ ದಫಾ	ಡಿಟೋ ಡಿಟೋ ..	0	6
ಮೂರನೇ ವ ಆ ತರುವಾಯ ಪ್ರತಿ ಸಲಕ್ಕೆ	.. ..	0	4

ಷರಾ.—ಚಂದಾ ವಗೈರೇ ಬಗ್ಯೆ ಪೋಸ್ಟೇಜ್ ಲೇಬಿಲ್ಲು ಕಳುಹಿಸಲ್ಪಟ್ಟಾಗ ರೂಪಾಯಿಗೆ ವಂದಾಣೆ ಯಂತೆ ಜಾಸ್ತೀ ಲೇಬಿಲ್ಲು ಕಳುಹಿಸಲ್ಪಡತಕ್ಕದ್ದು.

ಗವರ್ಮೆಂಟ್ ಆರ್ಡರ್ ಪ್ರಕಾರ ತಮಾಂ ಚಂದಾ ವೊಬಲಗುಗಳೂ, ಪ್ರಕಟನೇ ಚಾರ್ಜುಗಳೂ ಮುಂಗಡವಾಗಿ ಪಾವತಿ ಮಾಡಲ್ಪಡಬೇಕು.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಯಾದ ದರಖಾಸ್ತುಗಳು ಮೈಸೂರ್ ಗವರ್ಮೆಂಟ್ ಜನರಲ್ ಮತ್ತು ರೆವಿನ್ಯೂ ಇಲಾಖೆ ಸೆಕ್ರೆಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದ್‌ಗಳು ಇದರಡಿ ರುಜೂ ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಲಾಗಾಯತು ಒಂದು ವಾರದ ವೊಳಗಾಗಿ ತಿಳಿಸಲ್ಪಡಬೇಕು.

ಮೈಸೂರ ಗೆಜೆಟ್‌ನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ವ ಇಸ್ತಿಹಾರ್‌ನಾಮೆಗಳೂ ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಮಂಗಳವಾರದ ದಿವಸ ಮಧ್ಯಾನ್ಹ 12 ಘಂಟೆ ವಳಗಾಗಿ ಕಂಪ್ಯೆಲರ್ ಆಫಿಸಿಗೆ ತಲಪಬೇಕಾಗಿರುತ್ತೆ, ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರ್ತು ಅನ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಲ್ಪಡುತ್ತೆಂಬ ಖಾತರ್ ಯಿಲ್ಲ.

ತಾರೀಖು 26ನೇ ಆಗಸ್ಟ್ 1896.

ಗೆಜೆಟ್ ಚಂದಾದಾರರು ಚಂದಾ ಹಣವನ್ನು ಪೋಸ್ಟ್‌ಆಫಿಸ್ ಮನಿಆರ್‌ಡರ್ ಮೂಲಕ ಕಳುಹಿಸುತ್ತಾ ಅವರ ಹೆಸರು ಸರಿಯಾದ ವಿಳಾಸ ಮುಂತಾದ ತಪ್ಶೀಲ್ ತಿಳಿಸದೇಲೂ ಮತ್ತು ರಿಕಾರ್ಡಿನಲ್ಲಿ ಯಿಡುವದಕ್ಕೆ ವಿಶೇಷ ಅನನುಕೂಲವಾಗಿರುಂಥಾ ಕೂಪರ್‌ಗಳಿಗೆ ಮೇಲೆ ಅಸ್ಪಷ್ಟವಾಗಿ ಬರಿಯುವದರಿಂದಲೂ ವಿಶೇಷ ಗಲಾಟೆಗೆ ಆಸ್ಪದವಾಗಿರುವದರಿಂದ ಸರ್ವರಿಗೂ ತಿಳಿಸುವದೇನಂದರೆ,—ಯಲ್ಲಾ ತಾಲ್ಲೂಕು ಖಜಾನೆಗಳಲ್ಲಿಯೂ ಗೆಜೆಟ್ ಚಂದಾ ಮೊಬಲಗು ತೆಗದುಕೊಂಡು ರೀತಿ ಕೊಡುವ ಬಗ್ಯಾಗಿ ಆಪ್ಪಣೆ ಯಿಹುವದ್ದರಿಂದ ಇನ್ನು ಮೇಲೆ ಮೈಸೂರ್ ಶೀಮೆ ಅಲ್ಲದ ಇತರ ಸ್ಥಳಗಳಿಂದ ಬರುವ ಮನಿಆರ್‌ಡರ್ ಹೊರ್ತಾಗಿ ಅನ್ಯಥಾ ಆ ಬಗ್ಯಾಗಿ ಈ ಆಫಿಸಿಗೆ ಕಳುಹಿಸಲ್ಪಡುವ ಯಾವ ಮನಿಆರ್‌ಡರುಗಲಿ ಈ ಆಫಿಸಿನಲ್ಲಿ ಅಂಗೀಕರಿಸಲ್ಪಡಲಾರದು ಮತ್ತು ಪೋಸ್ಟ್ ಕಾರ್ಡ್ ಮೂಲಕ ಅಥವಾ ನೋಟ್ ಪೇಪರಿಗಿಂತಲೂ ಕಮ್ಮಿಯಾದ ಕಾಗದ್ದಲ್ಲಿ ಬರಿಯಲ್ಪಡುವ ಯಾವ ಅಂಶಕ್ಕೂ ನಿಗೆ ಕೊಡಲ್ಪಡಲಾರದು.

ಸಿ. ರಾಘವಾಚಾರ್ಲು,
ಮೈಸೂರ್ ಗೆಜೆಟ್ ಕಂಪ್ಯೆಲರ್.

Mysore Govt. Central Press, Bangalore.—1896.